ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 568 ಸೇನೆನಿ 2015

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ, ಬೆಂಗಳೂರು
ದಿನಾಂಕ:06/07/2016

## ಸುತ್ತೋಲೆ

ವಿಷಯ : ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರಲ್ಲಿ ಕಲ್ಪಿಸಲಾಗಿರುವ ಗರಿಷ್ಟ ವಯೋಮಿತಿಯ ಸಡಿಲಿಕೆಯನ್ನು ಸರ್ಕಾರದ ಎಲ್ಲಾ ಇಲಾಖೆಗಳು ಆಯಾ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅಳವಡಿಸಿಕೊಳ್ಳುವ ಬಗ್ಗೆ

*****

ರಾಜ್ಯ ಸಿವಿಲ್ ಸೇವಾ ಹುದ್ದೆಗಳ ನೇರ ನೇಮಕಾತಿಯಲ್ಲಿ ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 6(3)(ಸಿ)ರಡಿ ಈ ಕೆಳಕಂಡಂತೆ ಗರಿಷ್ಠ ವಯೋಮಿತಿಯನ್ನು ಸಡಿಲಿಸಲು ಆಸ್ಪದ ಕಲ್ಪಿಸಲಾಗಿರುತ್ತದೆ.

"In the case of a candidate who is an ex-serviceman, by three years plus the number of years of service rendered by him in the Armed Forces of the Union;"

ಆದಾಗ್ಯೂ ಕೆಲವು ಇಲಾಖೆಗಳು ರೂಪಿಸಿಕೊಂಡಿರುವ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ / ವಿಶೇಷ ನಿಯಮಾವಳಿಗಳಲ್ಲಿ ಮೇಲ್ಕಂಡಂತೆ ಮಾಜಿ ಸೈನಿಕರಿಗೆ ಗರಿಷ್ಠ ವಯೋಮಿತಿಯನ್ನು ಸಡಿಲಿಸುವ ಅವಕಾಶವನ್ನು ಕಲ್ಪಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಇದರಿಂದಾಗಿ ಮಾಜಿ ಸೈನಿಕರು ನೇಮಕಾತಿಗೆ ಅರ್ಜಿ ಸಲ್ಲಿಸಲು ಸಾಧ್ಯವಾಗದೇ ಅವಕಾಶದಿಂದ ವಂಚಿತರಾದಂತಾಗುತ್ತದೆ.

ಪು.ತಿ.ನೋ..2

ಆದುದರಿಂದ, ಮಾಜಿ ಸೈನಿಕರಿಗೆ ಗರಿಷ್ಠ ವಯೋಮಿತಿಯನ್ನು ಸಡಿಲಿಸುವ ಕುರಿತಂತೆ ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 6(3)(ಸಿ)ರಡಿ ಕಲ್ಪಿಸಲಾಗಿರುವ ಆಸ್ಪದವನ್ನು ಎಲ್ಲಾ ಇಲಾಖೆಗಳು ಆಯಾ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ / ವಿಶೇಷ / ಇತರೆ ನಿಯಮಗಳಲ್ಲಿ ಹಾಗೂ ನೇಮಕಾತಿ ಅಧಿಸೂಚನೆಗಳಲ್ಲಿ ಕಡ್ಡಾಯವಾಗಿ ಅಳವಡಿಸಿಕೊಳ್ಳಲು ಕ್ರಮಕೈಗೊಳ್ಳುವಂತೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Gayathri M.R 06/07/16

(ಗಾಯತ್ರಿ ಎಂ.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ದಿನಾಂಕ: 06/07/2016ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 500 ಪ್ರತಿಗಳನ್ನು ಒದಗಿಸಲು.

<u>ಇವರಿಗೆ:</u>

1. ಸರ್ಕಾರದ ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು
2. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ಪರಿಷತ್ತು, ಬೆಂಗಳೂರು
3. ಎಲ್ಲಾ ಇಲಾಖಾ ಮುಖ್ಯಸ್ಥರು
4. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
5. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
6. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
7. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
8. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯಭವನ, ಕೆ.ಜಿ.ರಸ್ತೆ, ಬೆಂಗಳೂರು- 560 009.
9. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣ, ಬಹುಮಹಡಿ ಕಟ್ಟಡ, ಬೆಂಗಳೂರು
10. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು
11. ಸರ್ಕಾರದ ಎಲ್ಲಾ ವಿಶೇಷ / ಅಪರ / ಜಂಟಿ / ಉಪ / ಅಧೀನ ಕಾರ್ಯದರ್ಶಿಗಳು
12. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು
13. ಶಾಖಾ ರಕ್ಷಾ ಕಡತ / ಅಧಿಕ ಪ್ರತಿಗಳು (* ಮುಖ ಪತ್ರದೊಂದಿಗೆ)